ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/01/ಇಎಸ್‌ಟಿ(9)/2019/2340

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001.
ದಿನಾಂಕ: 27/02/2020

## ಹಿಂಬರಹ

ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ : ಆಇ 1 ಸೇಬಿಸೇ 2020 ದಿನಾಂಕ:06/02/2020 ರ ಪ್ರತಿಯನ್ನು, ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ (ಇಲಾಖಾ ವೆಬ್‌ಸೈಟ್ ಮುಖಾಂತರ)
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ, ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ.
3. ಈ ನಿರ್ದೇಶನಾಲಯದ ಇ.ಎಸ್.ಟಿ.(1) ರಿಂದ (10) ವಿಭಾಗಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ
4. ಈ ನಿರ್ದೇಶನಾಲಯದ ಎಂ.ಎಸ್.ಸಿ. ವಿಭಾಗಕ್ಕೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ
5. ನಿರ್ದೇಶಕರ ಆಪ್ತ ಶಾಖೆಗೆ
6. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

Sh-est(9) Endsmnt

13877

## ಕರ್ನಾಟಕ ಸರ್ಕಾರ

ವಿಷಯ: ಮಗುವನ್ನು ದತ್ತು ಪಡೆದ ಸರ್ಕಾರಿ ನೌಕರರಿಗೆ ಪಿತೃತ್ವ ಮತ್ತು ಮಾತೃತ್ವ ರಜೆ ಮಂಜೂರು ಮಾಡುವ ಬಗ್ಗೆ.

ಓದಲಾಗಿದೆ: 1. ಅಧಿಸೂಚನೆ ಸಂಖ್ಯೆ: ಆಇ 2 ಸನಿತಿ 1993, ದಿನಾಂಕ:22.02.1995.
2. ಅಧಿಸೂಚನೆ ಸಂಖ್ಯೆ: ಆಇ 4 ಸನಿತಿ 1999, ದಿನಾಂಕ:02.06.2000.

ಪ್ರಸ್ತಾವನೆ:-

ಮೇಲೆ ಓದಲಾದ ಸರ್ಕಾರದ ಅಧಿಸೂಚನೆ (1)ರಲ್ಲಿ ರಾಜ್ಯ ಸರ್ಕಾರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮಹಿಳಾ ಸರ್ಕಾರಿ ನೌಕರಳು ಮಗುವೊಂದನ್ನು ದತ್ತು ತೆಗೆದುಕೊಂಡಾಗ ಒಂದು ವರ್ಷದ ಅಥವಾ ದತ್ತಕ ಮಗುವಿಗೆ ಒಂದು ವರ್ಷ ವಯಸ್ಸಾಗುವವರೆಗೆ ಇವಗಳಲ್ಲಿ ಯಾವುದು ಕಡಿಮೆಯೋ ಅವರೆಗೆ ದೊರೆಯಬಹುದಾದ ಮತ್ತು ಅನುಮತಿಸಬಹುದಾದ ರಜೆಯನ್ನು (60 ದಿವಸಗಳು ಮೀರದಂತೆ ವೈದ್ಯಕೀಯ ಪ್ರಮಾಣಪತ್ರವನ್ನು ಹಾಜರುಪಡಿಸದೆ ಪರಿವರ್ತಿತ ರಜೆ ಮತ್ತು (ಗಳಿಸದ ರಜೆ ಸೇರಿದಂತೆ) ಅಂತಹ ಮಹಿಳಾ ಸರ್ಕಾರಿ ನೌಕರಳು ದತ್ತಕದ ಸಮಯದಲ್ಲಿ ಎರಡು ಜೀವಂತ ಮಕ್ಕಳನ್ನು ಹೊಂದಿರತಕ್ಕದ್ದಲ್ಲ ಎಂಬ ಷರತ್ತಿಗೊಳಪಟ್ಟು ಮಂಜೂರು ಮಾಡಲು ಅವಕಾಶ ಕಲ್ಪಿಸಿದೆ. ಮೇಲೆ ಓದಲಾದ ಸರ್ಕಾರದ ಅಧಿಸೂಚನೆ (2) ರಲ್ಲಿ ಪುರುಷ ನೌಕರರಿಗೆ ಅವನ ಪತ್ನಿಯ ಹೆರಿಗೆಯ ಪ್ರಾರಂಭದಲ್ಲಿ 15ದಿನಗಳ ಕಾಲ ಪಿತೃತ್ವ ರಜೆಯನ್ನು ಮಂಜೂರು ಮಾಡಲು ಅವಕಾಶ ಕಲ್ಪಿಸಿರುವುದಾಗಿದೆ. ಇದೇ ಮಾದರಿಯ ಸೌಲಭ್ಯವನ್ನು ದತ್ತಕ ಪಡೆಯುವ ರಾಜ್ಯ ಸರ್ಕಾರಿ ನೌಕರರಿಗೂ ಸಹ ಮಾತೃತ್ವ ಮತ್ತು ಪಿತೃತ್ವ ರಜೆಯ ಮಾದರಿಯಲ್ಲಿ ರಜೆಯನ್ನು ಮಂಜೂರು ಮಾಡುವಂತೆ ಕೋರಿ ಪ್ರಸ್ತಾವನೆಗಳನ್ನು ಸ್ವೀಕರಿಸಲಾಗುತ್ತಿದೆ.

ಈ ಹಿನ್ನೆಲೆಯಲ್ಲಿ, ಭಾರತ ಸರ್ಕಾರವು ತನ್ನ ವ್ಯಾಪ್ತಿಯ ಅರ್ಹ ನೌಕರರ ಪ್ರಕರಣಗಳಲ್ಲಿ ಮಗುವನ್ನು ದತ್ತು ಪಡೆಯುವಂತಹ ಸರ್ಕಾರಿ ನೌಕರರಿಗೆ ಎರಡು ಜೀವಂತ ಮಕ್ಕಳನ್ನು ಹೊಂದಿರತಕ್ಕದ್ದಲ್ಲವೆಂಬ ಷರತ್ತಿಗೆ ಒಳಪಟ್ಟು ಮಗುವಿಗೆ ಒಂದು ವರ್ಷ ತುಂಬುವ ಅವಧಿಗೆ ಮೀರದಂತೆ ಮಹಿಳಾ ನೌಕರರಿಗೆ ಹೆರಿಗೆ ರಜೆ ಮಾದರಿಯಲ್ಲಿ 180 ದಿನಗಳು ಮತ್ತು ಪುರುಷ ನೌಕರರಿಗೆ ಪಿತೃತ್ವ ರಜೆ ಮಾದರಿಯಲ್ಲಿ 15 ದಿನಗಳ ರಜೆಯ ಮಂಜೂರಾತಿ ಅವಕಾಶವನ್ನು ಕಲ್ಪಿಸಿದೆ. ಈ ಅಂಶಗಳನ್ನು ಅವಲೋಕಿಸಿ ರಾಜ್ಯ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 1 ಸೇನಿಸೇ 2020, ಬೆಂಗಳೂರು, ದಿನಾಂಕ:06/02/2020**

ಕರ್ನಾಟಕ ನಾಗರೀಕ ಸೇವಾ ನಿಯಮಗಳು-1958ರ ನಿಯಮ-135 ಎ ರಲ್ಲಿ ವಿಧಿಸಿರುವ ಇತರೆ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಮಹಿಳಾ ಸರ್ಕಾರಿ ನೌಕರಳು ಮಗುವನ್ನು ದತ್ತು ಪಡೆದ ಸಂದರ್ಭದಲ್ಲಿ 180 ದಿನಗಳ ರಜೆಯನ್ನು(ಹೆರಿಗೆ ರಜೆ ಮಾದರಿಯಲ್ಲಿ) ದತ್ತು ಪ್ರಕ್ರಿಯೆಯು ಮಾನ್ಯತೆ ಹೊಂದಿದ ದಿನಾಂಕದಿಂದ ಮಂಜೂರು ಮಾಡತಕ್ಕದ್ದು. ಅಂತಹ ದತ್ತಕ ಪಡೆದ ಪ್ರಕರಣದಲ್ಲಿ ಪಿತೃತ್ವ ರಜೆ ಮಾದರಿಯಲ್ಲಿಯೇ ಕರ್ನಾಟಕ ನಾಗರೀಕ ಸೇವಾ ನಿಯಮಗಳು-1958ರ ನಿಯಮ-135 ಬಿ ರಲ್ಲಿ ವಿಧಿಸಿರುವ ಇತರೆ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು 15ದಿನಗಳ ರಜೆಯನ್ನು ದತ್ತು ಪ್ರಕ್ರಿಯೆಯು ಮಾನ್ಯತೆ ಹೊಂದಿದ ದಿನಾಂಕದಿಂದ ಮಂಜೂರು ಮಾಡತಕ್ಕದ್ದು.

ಈ ಬಗ್ಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗೆ ಅವಶ್ಯಕ ತಿದ್ದುಪಡಿಯನ್ನು ಪ್ರತ್ಯೇಕವಾಗಿ ಪರಿಗಣಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Suvarna B.S
(ಬಿ.ಎಸ್. ಸುವರ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-I)

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 100 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು ಕೋರಿ ಕಳುಹಿಸಿದೆ.

ಪ್ರತಿ:

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು/ಅಪರಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.
4. ಎಲ್ಲಾ ಜಿಲ್ಲಾಧಿಕಾರಿಗಳು.
5. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗ.
6. ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
7. ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್ ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001
8. ಮಹಾಲೇಖಪಾಲರು (ಇ & ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್ ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001
9. ಮಹಾಲೇಖಪಾಲರು (ಎ & ಇ), ಕರ್ನಾಟಕ, ಪೋಸ್ಟ್ ಬಾಕ್ಸ್ ಸಂಖ್ಯೆ-5329/5369, ಪಾರ್ಕ್ ಹೌಸ್ ರೋಡ್, ಬೆಂಗಳೂರು.
10. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚನ್ಯಾಯಾಲಯ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
12. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
14. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
15. ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ವಿಧಾನ ಪರಿಷತ್ತು, ಬೆಂಗಳೂರು.
16. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
17. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು.
18. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್, ಕೊಠಡಿ ಸಂಖ್ಯೆ:145-ಎ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
19. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
20. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
21. ಕರ್ನಾಟಕ ಸರ್ಕಾರಿ ಸಚಿವಾಲಯದ ಗ್ರಂಥಾಲಯ; ವಿಧಾನ ಮಂಡಲದ ಗ್ರಂಥಾಲಯ.
22. ವಾರಪತ್ರ/ಶಾಖೆಯ ರಕ್ಷಾ ಕಡತ.

[ಕ್ರಮ ಸಂಖ್ಯೆ:7 ರಿಂದ 18 ರವರೆಗೆ ನಮೂದಿತವಾದ ಅಧಿಕಾರಿಗಳಿಗೆ ಪತ್ರದ ಮೂಲಕ].
ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲ ತಾಣ www.finance.kar.nic.in ವೀಕ್ಷಿಸಿ.